ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :—

ಅ) ಇಲ್ಲ. ಆದರೆ ಅಥಣಿ ತಾಲ್ಲೂಕಿನಲ್ಲಿ ಅಗತ್ಯಕ್ಕೆ ಅನುಗುಣವಾಗಿ ಪದವಿ ಪೂರ್ವ ಕಾಲೇಜುಗಳು ಇರುವುದರಿಂದ ಶೈಕ್ಷಣಿಕವಾಗಿ ವಿದ್ಯಾರ್ಥಿಗಳ ಭೋದನೆಗೆ ಯಾವುದೇ ತೊಂದರೆಯಿರುವುದಿಲ್ಲ.

ಆ), ಇ) ಯಾವುದೇ ಸರ್ಕಾರಿ ಪದವಿ ಪೂರ್ವ ಕಾಲೇಜುಗಳು ಇರುವುದಿಲ್ಲ. ಆದರೆ 11 ಖಾಸಗಿ ಪದವಿ ಪೂರ್ವ ಕಾಲೇಜುಗಳು ಈಗಾಗಲೇ ಇರುವುದರಿಂದ ವಿದ್ಯಾರ್ಥಿಗಳಿಗೆ ಯಾವುದೇ ತೊಂದರೆ ಉಂಟಾಗಿರುವುದಿಲ್ಲ. ಆದುದರಿಂದ ಇನ್ನೊಂದು ಕಾಲೇಜಿನ ಅವಶ್ಯಕತೆ ಕಂಡು ಬರುವುದಿಲ್ಲ.

ಪ್ರೌಢಶಾಲೆಗಳಿಗೆ ಗಣಕಯಂತ್ರದ ಶಿಕ್ಷಣದ ವ್ಯವಸ್ಥೆ

2526 (2995) ಶ್ರೀ ಗೋಪಾಲ ಪೂಜಾರಿ ಹೆಚ್. (ಕಾರ್ಕಳ) :— ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಕಳೆದ ಶೈಕ್ಷಣಿಕ ವರ್ಷದಲ್ಲಿ ಕೆಲವು ಪ್ರೌಢ ಶಾಲೆಗಳಿಗೆ ಕಂಪ್ಯೂಟರ್ ಒದಗಿಸಲಾಗಿದೆ; ಉಳಿದ ಪ್ರೌಢಶಾಲೆಗಳಿಗೆ ಕಂಪ್ಯೂಟರ್ ಶಿಕ್ಷಣದ ವ್ಯವಸ್ಥೆ ಮಾಡಲಾಗುತ್ತಿದೆಯೇ;

ಆ) ಖಾಸಗಿ ಶಾಲೆಗಳಲ್ಲಿ ಪ್ರಾಥಮಿಕ ಹಂತದಲ್ಲಿ ಕಂಪ್ಯೂಟರ್ ಜ್ಞಾನ ಕಲಿಯುತ್ತಿರುವುದರಿಂದ ಸರ್ಕಾರಿ ಶಾಲೆಗಳಲ್ಲಿ ಈ ವ್ಯವಸ್ಥೆ ಒದಗಿಸಲು ಕ್ರಮ ಕೈಗೊಳ್ಳಲಾಗುತ್ತಿದೆಯೇ; ಈ ಬಗ್ಗೆ ಸರ್ಕಾರದ ನಿಲುವೇನು?

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :—

ಅ) 2001-02ನೇ ಸಾಲಿನಲ್ಲಿ ಮಾಹಿತಿ ಸಿಂಧು ಯೋಜನೆಯಡಿಯಲ್ಲಿ ಸಾವಿರ ಸರ್ಕಾರಿ ಪ್ರೌಢಶಾಲೆಗಳಲ್ಲಿ ಕಂಪ್ಯೂಟರ್ ಶಿಕ್ಷಣ ಜಾರಿಗೊಳಿಸಲಾಗುತ್ತಿದ್ದು, ಈ ಯೋಜನೆಯನ್ನು ವಿಶ್ವಬ್ಯಾಂಕ್ ನೆರವಿನಿಂದ ಉಳಿದ 1667 ಸರ್ಕಾರಿ ಪ್ರೌಢಶಾಲೆಗಳಿಗೂ ವಿಸ್ತರಿಸುವ ಉದ್ದೇಶ ಸರ್ಕಾರಕ್ಕಿದೆ.

ಆ) ಪ್ರಾಥಮಿಕ ಹಂತದಲ್ಲಿ ಕಂಪ್ಯೂಟರ್ ಜ್ಞಾನವನ್ನು ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಅಳವಡಿಸುವ ಕುರಿತಂತೆ ವಿಶ್ವಬ್ಯಾಂಕ್ ನೆರವಿನಿಂದ ಕ್ರಮ ಕೈಗೊಳ್ಳಲು ಉದ್ದೇಶಿಸಲಾಗಿದೆ.